# ಡಾ: ಬಿ.ಆರ್.ಅಂಬೇಡ್ಕರ್ ಅಭಿವೃದ್ಧಿ ನಿಗಮ ನಿಯಮಿತ

೯ನೇ ಮಹಡಿ, ವಿಶ್ವೇಶ್ವರಯ್ಯ ಚಿಕ್ಕ ಗೋಪುರ, ಡಾ: ಅಂಬೇಡ್ಕರ್ ವೀದಿ, ಬೆಂಗಳೂರು-01.

**ದಿನಾಂಕ:12.01.2015ರಂದು ಮಧ್ಯಾಹ್ನ 3.30ಗಂಟೆಗೆ ನಿಗಮದ ಕೇಂದ್ರ ಕಛೇರಿಯಲ್ಲಿರುವ ಮಾನ್ಯ ಅಧ್ಯಕ್ಷರ ಕೊಠಡಿಯಲ್ಲಿ ನಡೆದ ನಿಗಮದ 204ನೇ ನಿರ್ದೇಶಕರ ಮಂಡಳ ಸಭೆಯ ನಡವಳಿಗಳು:**

**ಹಾಜರಾತಿ**

| ಹೆಸರು ಮತ್ತು ಪದನಾಮ | |
|---|---|
| ಕುಮಾರಿ ಮಲ್ಲಾಜಮ್ಮ,<br>ಮಾನ್ಯ ಅಧ್ಯಕ್ಷರು, ಡಾ:ಬಿ.ಆರ್.ಅಂಬೇಡ್ಕರ್ ಅಭಿವೃದ್ಧಿ ನಿಗಮ ನಿಯಮಿತ | ಅಧ್ಯಕ್ಷರು |
| ಶ್ರೀ ಎನ್. ಮಂಜುನಾಥ ಪ್ರಸಾದ್, ಭಾ.ಆ.ಸೇ.,<br>ಸರ್ಕಾರದ ಕಾರ್ಯದರ್ಶಿಗಳು,<br>ಸಮಾಜ ಕಲ್ಯಾಣ ಇಲಾಖೆ,<br>ಕರ್ನಾಟಕ ಸರ್ಕಾರ | ಸದಸ್ಯರು |
| ಶ್ರೀ ಹೀರಾನಾಯಕ್, ಕೆ.ಎ.ಎಸ್., (ಎಸ್‌ಟಿಎಸ್)<br>ವ್ಯವಸ್ಥಾಪಕ ನಿರ್ದೇಶಕರು,<br>ಕರ್ನಾಟಕ ತಾಂಡಾ ಅಭಿವೃದ್ಧಿ ನಿಗಮ | ಸದಸ್ಯರು |
| ಶ್ರೀ.ಕೆ.ಸಿ.ಶ್ರೀರಾಮಯ್ಯ, ಕ.ಆ.ಸೇ., (ಎಸ್‌ಟಿಎಸ್)<br>ವ್ಯವಸ್ಥಾಪಕ ನಿರ್ದೇಶಕರು<br>ಡಾ:ಬಿ.ಆರ್.ಅಂಬೇಡ್ಕರ್ ಅಭಿವೃದ್ಧಿ ನಿಗಮ ನಿಯಮಿತ | ಸದಸ್ಯ ಕಾರ್ಯದರ್ಶಿ |
| ಶ್ರೀಮತಿ ಎಲ್. ರಾಜೇಶ್ವರಿ<br>ಉಪ ಕಾರ್ಯದರ್ಶಿಗಳು,<br>ಸಾರ್ವಜನಿಕ ಉದ್ದಿಮೆಗಳ ಇಲಾಖೆ | ಸದಸ್ಯರು |
| ಶ್ರೀ ರಾಮಚಂದ್ರಯ್ಯ,<br>ಸರ್ಕಾರದ ಉಪ ಕಾರ್ಯದರ್ಶಿಗಳು,<br>ಆರ್ಥಿಕ ಇಲಾಖೆ, | ಸದಸ್ಯರು |

**ಗೈರು ಹಾಜರಿ:**

| | |
|---|---|
| ಶ್ರೀ. ಎಸ್.ಎನ್.ಜಯರಾಂ, ಭಾ.ಆ.ಸೇ.,<br>ಆಯುಕ್ತರು,<br>ಸಮಾಜ ಕಲ್ಯಾಣ ಇಲಾಖೆ, | ಸದಸ್ಯರು |
| ಅಧ್ಯಕ್ಷರು ಹಾಗೂ ವ್ಯವಸ್ಥಾಪಕ ನಿರ್ದೇಶಕರು<br>ರಾಷ್ಟ್ರೀಯ ಪರಿಶಿಷ್ಟ ಜಾತಿ ಹಣಕಾಸು ಮತ್ತು ಅಭಿವೃದ್ಧಿ ನಿಗಮ, ಭಾರತ ಸರ್ಕಾರ, ನವದೆಹಲಿ, | ಸದಸ್ಯರು |
| ನಿರ್ದೇಶಕರು,<br>ಸಾಮಾಜಿಕ ನ್ಯಾಯ ಮತ್ತು ಸಬಲೀಕರಣ ಮಂತ್ರಾಲಯ,<br>ಭಾರತ ಸರ್ಕಾರ, ನವದೆಹಲಿ | ಸದಸ್ಯರು |

ವ್ಯವಸ್ಥಾಪಕ ನಿರ್ದೇಶಕರು ನಿಗಮದ ಮಾನ್ಯ ಅಧ್ಯಕ್ಷರನ್ನು ಹಾಗೂ ಸಭೆಯಲ್ಲಿ ಹಾಜರಿದ್ದ ಸರ್ಕಾರದ ಕಾರ್ಯದರ್ಶಿಗಳು, ಸಮಾಜ ಕಲ್ಯಾಣ ಇಲಾಖೆ ಮತ್ತು ಹಾಜರಿದ್ದ ನಿರ್ದೇಶಕರ ಮಂಡಳಿಯ ಇತರೆ ಸದಸ್ಯರನ್ನು ಸ್ವಾಗತಿಸಿದರು. ಸಭೆಗೆ ಕೋರಂ ಇರುವುದನ್ನು ಖಾತರಿಪಡಿಸಿಕೊಂಡ ನಂತರ ಸಭೆ ನಡೆಸಬಹುದೆಂದು ಮಾನ್ಯ ಅಧ್ಯಕ್ಷರ ಗಮನಕ್ಕೆ ತರಲಾಯಿತು. 204ನೇ ಆಡಳಿತ ಮಂಡಳಿಯ ಸಭೆಯ ಅಧ್ಯಕ್ಷತೆಯನ್ನು ವಹಿಸಿ ಸಭೆಯನ್ನು ನಡೆಸಿಕೊಡಲು ವ್ಯವಸ್ಥಾಪಕ ನಿರ್ದೇಶಕರು ನಿಗಮದ ಮಾನ್ಯ ಅಧ್ಯಕ್ಷರನ್ನು ಕೋರಿದರು. 204ನೇ ಆಡಳಿತ ಮಂಡಳಿ ಸಭೆಯ ವಿಷಯವಾರು ನಡವಳಿ ಈ ಕೆಳಗಿನಂತಿದೆ.

**ವಿಷಯ ಸಂಖ್ಯೆ– 1 : 203ನೇ ನಿರ್ದೇಶಕರ ಮಂಡಳಿ ಸಭೆಯ ನಡವಳಿ ಅಂಗೀಕರಿಸುವ ಬಗ್ಗೆ**

ದಿನಾಂಕ:06.12.2014ರಂದು ನಡೆದ 203ನೇ ನಿರ್ದೇಶಕರ ಮಂಡಳಿಯ ಸಭೆಯಲ್ಲಿ ತೆಗೆದುಕೊಂಡ ವಿಷಯವಾರು ತೀರ್ಮಾನಗಳ ನಡವಳಿಯನ್ನು ಸರ್ವ ಸದಸ್ಯರಿಗೂ ಕಳುಹಿಸಲಾಗಿತ್ತು. ಯಾವುದೇ ಸದಸ್ಯರುಗಳಿಂದ ಸದರಿ ನಡವಳಿಯ ಬಗ್ಗೆ ವ್ಯತಿರಿಕ್ತ ಅಭಿಪ್ರಾಯಗಳು ಬಂದಿರುವುದಿಲ್ಲವೆಂಬುದನ್ನು ಸಭೆಯ ಗಮನಕ್ಕೆ ತರಲಾಯಿತು ಮತ್ತು ನಡವಳಿಯನ್ನು ಯಥವತ್ತಾಗಿ ಅಂಗೀಕರಿಸುವ ಬಗ್ಗೆ ಸಭೆಯನ್ನು ಕೋರಲಾಯಿತು.

**ನಿರ್ಣಯ: 1 : ಸದಸ್ಯರಿಂದ ವ್ಯತಿರಿಕ್ತ ಅಭಿಪ್ರಾಯಗಳು ಬಾರದ ಕಾರಣ, ನಡವಳಿಯನ್ನು ಯಥಾವತ್ತಾಗಿ ಅಂಗೀಕರಿಸಲು ಸಭೆಯು ನಿರ್ಣಯಿಸಿತು.**

**ವಿಷಯ ಸಂಖ್ಯೆ–2: 203ನೇ ನಿರ್ದೇಶಕರ ಮಂಡಳಿ ಸಭೆಯ ನಡವಳಿ ಮೇಲೆ ಕೈಗೊಂಡ ಅನುಸರಣಾ ವರದಿ**

203ನೇ ಆಡಳಿತ ಮಂಡಳಿ ಸಭೆಯಲ್ಲಿ ಆದ ನಡವಳಿಗಳ ಮೇಲೆ ಸಭಾ ನಿರ್ಣಯದಂತೆ ಕ್ರಮ ಕೈಗೊಳ್ಳಲಾಗಿದೆ ಎಂದು ಸಭೆಗೆ ವಿವರಿಸಲಾಯಿತು. ಮಾನ್ಯ ಕಾರ್ಯದರ್ಶಿಗಳು, ಸಮಾಜ ಕಲ್ಯಾಣ ಇಲಾಖೆ ರವರು ಅನುಸರಣಾ ವರದಿಯ ಬಗ್ಗೆ ಮಾತನಾಡುತ್ತಾ ಈಗಾಗಲೇ ಕ್ರಿಯಾ ಯೋಜನೆಯಲ್ಲಿ ನಿಗದಿಪಡಿಸಿರುವ ಗುರಿಗನುಗುಣವಾಗಿ ಬಹುತೇಕ ಶಾಸಕರ ಆಯ್ಕೆ ಸಮಿತಿಗಳು ಫಲಾಪೇಕ್ಷಿಗಳ ಆಯ್ಕೆ ಪ್ರಕ್ರಿಯೆಯನ್ನು ಅಂತಿಮಗೊಳಿಸಿರುವುದಿಲ್ಲ, ಹೆಚ್ಚುವರಿಯಾಗಿ ನೀಡಿರುವ ಗುರಿಗಳಿಗೂ ಪ್ರಸಕ್ತ ವರ್ಷದಲ್ಲೇ ಆಯ್ಕೆ ಪ್ರಕ್ರಿಯೆಯನ್ನು ಮುಗಿಸಲು ಶಾಸಕರನ್ನು ಕೋರಿ ಮಾನ್ಯ ಅಧ್ಯಕ್ಷರಿಂದ ಪತ್ರ ಬರೆಸಬಹುದಾಗಿದೆ ಎಂದು ಅಭಿಪ್ರಾಯಿಸಿದರು. ಮಾನ್ಯ ಅಧ್ಯಕ್ಷರು ಮಾತನಾಡಿ ತಾವು ಈಗಾಗಲೇ ಎಲ್ಲಾ ಶಾಸಕರಿಗೆ ಪತ್ರ ಬರೆದು ಆಯ್ಕೆ ಪ್ರಕ್ರಿಯೆಯನ್ನು ಪೂರ್ಣಗೊಳಿಸಲು ವಿನಂತಿಸಿದ್ದು, ಇನ್ನೊಮ್ಮೆ ಪತ್ರ ಬರೆಯುತ್ತೇನೆ ಎಂದು ಸಭೆಗೆ ತಿಳಿಸಿದರು. ಇನ್ನುಳಿದಂತೆ ಸಭೆಯು ಅನುಸರಣಾ ವರದಿಯನ್ನು ಪರಾಂಭರಿಸಿತು ಮತ್ತು ಯಥಾವತ್ತಾಗಿ ಒಪ್ಪಲು ತೀರ್ಮಾನಿಸಿತು.

**ನಿರ್ಣಯ: 2 : ಆಯ್ಕೆ ಪ್ರಕ್ರಿಯೆ ಅಂತಿಮಗೊಳಿಸದ ಶಾಸಕರ ಆಯ್ಕೆ ಸಮಿತಿಗಳಿಗೆ ಆಯ್ಕೆ ಪ್ರಕ್ರಿಯೆಯನ್ನು ಶೀಘ್ರವಾಗಿ ಅಂತಿಮಗೊಳಿಸಲು ವಿನಂತಿಸಿ ಇನ್ನೊಮ್ಮೆ ಪತ್ರ ಬರೆಯಲು ಹಾಗೂ ಸಭಾ ನಡವಳಿಗಳ ಮೇಲೆ ಕೈಗೊಂಡಿರುವ ಕ್ರಮಗಳನ್ನು ಯಥಾವತ್ತಾಗಿ ಒಪ್ಪಲು ನಿರ್ಣಯಿಸಿತು.**

**ವಿಷಯ ಸಂಖ್ಯೆ-3 : "ಭೂ ಒಡೆತನ ಯೋಜನೆ"ಗೆ ಅವಧಿಸಾಲ ಪಡೆಯಲು ಪರ್ಯಾಯ ಮಾರ್ಗ ಕಂಡುಕೊಳ್ಳುವ ಕುರಿತು.**

ವ್ಯವಸ್ಥಾಪಕ ನಿರ್ದೇಶಕರು ಮಾತನಾಡಿ ನಿಗಮದ ವತಿಯಿಂದ ಅನುಷ್ಠಾನಗೊಳಿಸುತ್ತಿರುವ ಭೂ ಒಡೆತನ ಯೋಜನೆಗೆ ಬೇಡಿಕೆಗೆ ಅನುಗುಣವಾಗಿ ಎನ್.ಎಸ್.ಸಿ.ಎಫ್.ಡಿ.ಸಿ. ಸಂಸ್ಥೆಯು ಅವಧಿಸಾಲವನ್ನು ನೀಡದೇ ಇರುವುದರಿಂದ 2014-15ನೇ ಸಾಲಿನಲ್ಲಿ ರಾಜ್ಯ ಸರ್ಕಾರದಿಂದ ನೀಡಿರುವ ಷೇರು ಬಂಡವಾಳವನ್ನು ಈ ಬಾಬಿಗೆ ಉಪಯೋಗಿಸಿಕೊಳ್ಳಲು ಒಪ್ಪಿಗೆ ನೀಡಲು ಸಾಧ್ಯವಾಗುವುದಿಲ್ಲವೆಂದು ಮೌಖಿಕವಾಗಿ ತಿಳಿಸಿರುವ ವಿಷಯವನ್ನು ಸಭೆಯ ಗಮನಕ್ಕೆ ತಂದರು. ಅವಧಿಸಾಲವಾಗಿ ಪರಿವರ್ತಿಸಿಕೊಳ್ಳಲು ಸಲ್ಲಿಸಿದ್ದ ಮನವಿಯನ್ನು ಹಣಕಾಸು ಇಲಾಖೆಯು ಪರಿಶೀಲಿಸಿ, ಷೇರು ಬಂಡವಾಳವನ್ನು ಹಾಗೆಯೇ ಇಟ್ಟುಕೊಳ್ಳುವಂತೆ ತಿಳಿಸಿ, ನಿಗಮದಿಂದ ಸಲ್ಲಿಸಿದ ಪ್ರಸ್ತಾವನೆಯನ್ನು ಮೌಖಿಕವಾಗಿ ತಿರಸ್ಕರಿಸಿರುತ್ತದೆ. ಇದಕ್ಕೆ ಪರ್ಯಾಯ ಮಾರ್ಗವಾಗಿ ರಾಷ್ಟ್ರೀಕೃತ ವಾಣಿಜ್ಯ ಬ್ಯಾಂಕ್‌ನಿಂದ ನಿಗಮವು ಸಾಲ ಪಡೆದು ಎನ್.ಎಸ್.ಸಿ.ಎಫ್.ಡಿ.ಸಿ.ವತಿಯಿಂದ ನೀಡುತ್ತಿದ್ದ ಶೇ.6ರ ಬಡ್ಡಿ ದರದಲ್ಲಿ ಫಲಾನುಭವಿಗಳಿಗೆ ವಿತರಿಸಿದರೆ, ಹೆಚ್ಚುವರಿ ಬಡ್ಡಿಯನ್ನು ಸರ್ಕಾರವೇ ಆಯವ್ಯಯದಲ್ಲಿ ಭರಿಸುವುದಾಗಿಯೂ, ಈ ಸಂಬಂಧ ಪ್ರಸ್ತಾವನೆಯನ್ನು ಸರ್ಕಾರಕ್ಕೆ ಸಲ್ಲಿಸುವಂತೆಯೂ ಆರ್ಥಿಕ ಇಲಾಖೆಯ ಹಿರಿಯ ಅಧಿಕಾರಿಗಳು ತಿಳಿಸಿರುವ ವಿಷಯವನ್ನು ಸಭೆಯ ಗಮನಕ್ಕೆ ತಂದರು. ಈ ಹಿನ್ನೆಲೆಯಲ್ಲಿ 2014-15ನೇ ಸಾಲಿಗೆ ಅವಶ್ಯವಿರುವ ರೂ.33.64ಕೋಟಿಗಳ ಅವಧಿಸಾಲವನ್ನು ಯಾವುದಾದರೊಂದು ರಾಷ್ಟ್ರೀಕೃತ ವಾಣಿಜ್ಯ ಬ್ಯಾಂಕಿನಿಂದ ಪಡೆಯಲು ಹಾಗೂ ಹೆಚ್ಚುವರಿ ಬಡ್ಡಿಯನ್ನು ಸರ್ಕಾರದಿಂದ ಭರಿಸಲು ಮತ್ತು ಈ ಮೊತ್ತಕ್ಕೆ ಸರ್ಕಾರದ ಖಾತರಿಯನ್ನು ನೀಡಲು ಕೋರಿ ಪ್ರಸ್ತಾವನೆಯನ್ನು ಸಲ್ಲಿಸಲು ಸಭೆಯ ಅನುಮೋದನೆ ಕೋರಿದರು. ಸರ್ಕಾರದ ಕಾರ್ಯದರ್ಶಿಗಳು ಮಾತನಾಡಿ ರಾಷ್ಟ್ರೀಕೃತ ಬ್ಯಾಂಕುಗಳಿಂದ ಸಾಲ ಪಡೆಯುವ ಪರ್ಯಾಯ ವ್ಯವಸ್ಥೆಯನ್ನು ಸರ್ಕಾರದ ಮಟ್ಟದಲ್ಲಿ ಈಗಾಗಲೇ ಚರ್ಚಿಸಿದ್ದು, ಪ್ರಸ್ತಾವನೆಯನ್ನು ಆದಷ್ಟು ಬೇಗನೆ ಸಲ್ಲಿಸುವಂತೆಯೂ ಹಾಗೂ ನಿಗಮದ ಮಾನ್ಯ ಅಧ್ಯಕ್ಷರು ಈ ಸಂಬಂಧ ಪ್ರಧಾನ ಕಾರ್ಯದರ್ಶಿಗಳು, ಹಣಕಾಸು ಇಲಾಖೆ ರವರನ್ನು ಭೇಟಿ ಮಾಡಿ ಚರ್ಚಿಸಿದಲ್ಲಿ ಆದಷ್ಟು ಶೀಘ್ರ ಪ್ರಸ್ತಾವನೆಗೆ ಅನುಮೋದನೆ ಪಡೆಯಬಹುದಾಗಿದೆ ಎಂದು ಅಭಿಪ್ರಾಯಿಸಿದರು. ಅದರಂತೆ ಮಾನ್ಯ ಅಧ್ಯಕ್ಷರು ಈ ಸಂಬಂಧ ಕಾರ್ಯಪ್ರವೃತ್ತರಾಗುವುದಾಗಿ ಸಭೆಗೆ ತಿಳಿಸಿದರು.

**ನಿರ್ಣಯ - 3 : ನಿರ್ದೇಶಕರ ಮಂಡಳಿ ಸಭೆಯು ವಿಷಯವನ್ನು ಸುದೀರ್ಘವಾಗಿ ಚರ್ಚಿಸಿ ಭೂ ಒಡೆತನ ಯೋಜನೆಗೆ ಯಾವುದಾದರೊಂದು ರಾಷ್ಟ್ರೀಕೃತ ವಾಣಿಜ್ಯ ಬ್ಯಾಂಕ್‌ನಿಂದ ಅವಧಿಸಾಲ ಪಡೆಯುವ ಸಂಬಂಧ ಪ್ರಸ್ತಾವನೆಯನ್ನು ಸರ್ಕಾರಕ್ಕೆ ಸಲ್ಲಿಸಲು ಸಭೆಯು ಅನುಮೋದನೆ ನೀಡಿ ನಿರ್ಣಯಿಸಿತು.**

**ವಿಷಯ ಸಂಖ್ಯೆ-4 : ಶ್ರೀ ಅರುಣ, ಪ್ರಥಮ ದರ್ಜೆ ಸಹಾಯಕರು, ರಾಯಚೂರು ಜಿಲ್ಲೆ ಇವರ ಪರಿಕ್ಷಾರ್ಥ ಅವಧಿಯನ್ನು ಘೋಷಿಸುವ ಬಗ್ಗೆ.**

ವ್ಯವಸ್ಥಾಪಕ ನಿರ್ದೇಶಕರು ಮಾತನಾಡಿ ಶ್ರೀ.ಅರುಣ, ಪ್ರಥಮ ದರ್ಜೆ ಸಹಾಯಕರು ಇವರು ಕಲಬುರ್ಗಿ ಜಿಲ್ಲೆಯಲ್ಲಿ ದಿನಾಂಕ:19.05.2011 ರಿಂದ ಕಾರ್ಯನಿರ್ವಹಿಸುತ್ತಿದ್ದು, 2 ವರ್ಷಗಳ ಪರೀಕ್ಷಾರ್ಥ ಅವಧಿಯಲ್ಲಿ ನಿಗಮದ ಸೇವಾ ನಿಯಮಗಳಂತೆ ನಿಗದಿಪಡಿಸಿರುವ ಇಲಾಖಾ ಪರೀಕ್ಷೆಗಳಲ್ಲಿ ಉತ್ತೀರ್ಣರಾಗಲು 3 ವರ್ಷಕ್ಕಿಂತ ಹೆಚ್ಚು ಅವಧಿಯನ್ನು ತೆಗೆದುಕೊಂಡಿರುವುದರಿಂದ ಸದರಿಯವರ ಪರೀಕ್ಷಾರ್ಥ ಅವಧಿಯನ್ನು ವಿಸ್ತರಿಸಲು ಹಾಗೂ ಈ ಅವಧಿಯನ್ನು ತೃಪ್ತಿಕರವೆಂದು ಘೋಷಿಸಲು ನಿರ್ದೇಶಕರ ಮಂಡಳಿಯನ್ನು ಕೋರಿದರು.

**ನಿರ್ಣಯ-4: ಈ ವಿಷಯವನ್ನು ಚರ್ಚಿಸಿದ ಸಭೆಯು ಸದರಿಯವರು ಇಲಾಖಾ ಪರೀಕ್ಷೆಗಳಲ್ಲಿ ಉತ್ತೀರ್ಣರಾಗಿರುವುದರಿಂದ ಪರೀಕ್ಷಾರ್ಥ ಅವಧಿಯನ್ನು ತೃಪ್ತಿಕರವೆಂದು ಘೋಷಿಸಲು ನಿರ್ಣಯಿಸಿತು.**

**ವಿಷಯ ಸಂಖ್ಯೆ-5 : ಸಫಾಯಿ ಕರ್ಮಚಾರಿ ಪುನರ್ವಸತಿ ಯೋಜನೆಯಡಿ ಪ್ರಸ್ತಾವನೆಗಳು ಬಾರದಿರುವ ಜಿಲ್ಲೆಗಳಿಂದ ಭೌತಿಕ ಹಾಗೂ ಆರ್ಥಿಕ ಗುರಿಯನ್ನು ಕೋಲಾರ ಜಿಲ್ಲೆಗೆ ಮರುಹೊಂದಾಣಿಕೆ ಮಾಡಿಕೊಳ್ಳುವ ಬಗ್ಗೆ.**

ವ್ಯವಸ್ಥಾಪಕ ನಿರ್ದೇಶಕರು ಮಾತನಾಡಿ ಸಫಾಯಿ ಕರ್ಮಚಾರಿ ಪುನರ್ವಸತಿ ಯೋಜನೆಯಡಿ 2014-15ನೇ ಸಾಲಿನ ಕ್ರಿಯಾ ಯೋಜನೆಯಲ್ಲಿ ನಿಗದಿಪಡಿಸಿದ್ದ ಭೌತಿಕ ಹಾಗೂ ಆರ್ಥಿಕ ಗುರಿಗೆ ಅನುಗುಣವಾಗಿ ಈ ಕೆಳಗೆ ತಿಳಿಸಿರುವ ಜಿಲ್ಲೆಗಳಲ್ಲಿ ಪ್ರಸ್ತಾವನೆಗಳು ಬಾರದ ಹಿನ್ನೆಲೆಯಲ್ಲಿ ಹೆಚ್ಚುವರಿಯಾಗಿ ಪ್ರಸ್ತಾವನೆಗಳ ಬಂದಿರುವ ಕೋಲಾರ ಜಿಲ್ಲೆಗೆ ಮರು ಹಂಚಿಕೆ ಮಾಡಿಕೊಳ್ಳಲು ವಿಷಯವನ್ನು ಸಭೆಗೆ ಮಂಡಿಸಿದರು.

| ಕ್ರ.ಸಂ | ಜಿಲ್ಲೆಯ ಹೆಸರು | 2014-15ನೇ ಸಾಲಿನ ಆರಂಭಿಕ ಗುರಿ | ಮರು ಹಂಚಿಕೆ ಪ್ರಸ್ತಾವನೆ |
|---|---|---|---|
| 1 | ಬೆಂಗಳೂರು(ಗ್ರಾ) | 80 | 80 |
| 2 | ರಾಮನಗರ | 60 | 60 |
| 3 | ತುಮಕೂರು | 60 | 60 |
| 4 | ಶಿವಮೊಗ್ಗ | 40 | 35 |
| 5 | ಚಿಕ್ಕಮಗಳೂರು | 20 | 20 |
| 6 | ಹಾಸನ | 60 | 50 |
| 7 | ದಕ್ಷಿಣ ಕನ್ನಡ | 20 | 20 |
| 8 | ಕೊಡಗು | 20 | 20 |
| 9 | ಉಡುಪಿ | 20 | 20 |
| 10 | ಧಾರವಾಡ | 80 | 50 |
| 11 | ಹಾವೇರಿ | 20 | 20 |
| 12 | ಉತ್ತರ ಕನ್ನಡ | 20 | 20 |
| 13 | ಕೊಪ್ಪಳ | 20 | 20 |
| 14 | ಬೀದರ್ | 20 | 20 |
| | ಒಟ್ಟು | 540 | 495 |

**ನಿರ್ಣಯ: 5 : ಈ ವಿಷಯವನ್ನು ಚರ್ಚಿಸಿದ ಸಭೆಯು ಮೇಲೆ ತಿಳಿಸಿದ 14 ಜಿಲ್ಲೆಗಳಲ್ಲಿ ಪ್ರಸ್ತಾವನೆಗಳು ಬಾರದೇ ಇರುವುದರಿಂದ ಲಭ್ಯವಾಗುವ ಒಟ್ಟು 495 ಭೌತಿಕ ಗುರಿಯನ್ನು ಕೋಲಾರ ಜಿಲ್ಲೆಗೆ ಹೆಚ್ಚುವರಿಯಾಗಿ ಮರು ಹಂಚಿಕೆ ಮಾಡಲು ನಿರ್ಣಯಿಸಿತು.**

**ವಿಷಯ ಸಂಖ್ಯೆ-6: ಮಾನ್ಯ ಮುಖ್ಯಮಂತ್ರಿಗಳ ಅಧ್ಯಕ್ಷತೆಯಲ್ಲಿ ಪರಿಶಿಷ್ಟ ಜಾತಿ ಜನಾಂಗದವರ ಕಲ್ಯಾಣ ಕಾರ್ಯಕ್ರಮಗಳ ಸವಲತ್ತುಗಳನ್ನು ವಿತರಿಸಲು ಸಮ್ಮೇಳನವನ್ನು ಆಯೋಜಿಸುವ ಬಗ್ಗೆ.**

ವ್ಯವಸ್ಥಾಪಕ ನಿರ್ದೇಶಕರವರು ಮಾತನಾಡಿ ಮಾನ್ಯಮುಖ್ಯಮಂತ್ರಿಗಳು ನಿಗದಿಪಡಿಸುವ ದಿನಾಂಕದಂದು ಅಂಬೇಡ್ಕರ್ ಭವನ, ವಸಂತ ನಗರದಲ್ಲಿ ಸಮ್ಮೇಳನವನ್ನು ಏರ್ಪಡಿಸಿ, ಸದರಿ ಸಮ್ಮೇಳನದಲ್ಲಿ ನಿಗಮದಿಂದ ಪಡೆದಿದ್ದ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದವರ ಎಲ್ಲಾ ಸಾಲಗಳನ್ನು 2013-14ನೇ ಸಾಲಿನಲ್ಲಿ ಮನ್ನಾ ಮಾಡಿರುವುದರಿಂದ ಈ ಬಗ್ಗೆ ಮಾನ್ಯ ಮುಖ್ಯಮಂತ್ರಿಗಳಿಗೆ ಕೃತಜ್ಞತೆ ಸಲ್ಲಿಸಿ ಗೌರವಾರ್ಪಣೆ ಮಾಡುವುದು, ನಿಗಮದಲ್ಲಿ ಅನುಷ್ಠಾನಗೊಳಿಸುತ್ತಿರುವ ಯೋಜನೆಗಳಿಗೆ ಬದಲಾವಣೆ ತರಲು ದಲಿತ ಸಂಘ ಸಂಸ್ಥೆಗಳ ಪದಾಧಿಕಾರಿಗಳನ್ನು ಆಹ್ವಾನಿಸಿ ಅವರಿಂದ ಸಲಹೆಗಳನ್ನು ಪಡೆಯುವುದು ಹಾಗೂ 2015-16ನೇ ಸಾಲಿಗೆ ಹೆಚ್ಚಿನ ಅನುದಾನ ನೀಡುವಂತೆ ಸರ್ಕಾರವನ್ನು ಕೋರುವುದಾಗಿರುತ್ತದೆ ಎಂದು ಸಭೆಗೆ ತಿಳಿಸಿದರು. ಸದರಿ ಸಮ್ಮೇಳನಕ್ಕೆ ಬೆಂಗಳೂರು ನಗರ, ಬೆಂಗಳೂರು ಗ್ರಾಮಾಂತರ, ರಾಮನಗರ, ಮಂಡ್ಯ, ತುಮಕೂರು, ಚಿಕ್ಕಬಳ್ಳಾಪುರ ಮತ್ತು